## ದಿನಾಂಕ: 18–08–2011 ರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಮಂಡಿಸಲಾದ ಸಂತಾಪ ಸೂಚಕ ನಿರ್ಣಯ

**ವಿಷಯದ ಸಂಖ್ಯೆ : 168/2011–12**

ಶ್ರೀ. ಬಿ.ಆರ್.ನಂಜುಂಡಪ್ಪ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ದಿನಾಂಕ:29–07–2011ರಂದು ಹಿರಿಯ ರಾಜಕೀಯ ಮುತ್ಸದ್ದಿ, ಮಾಜಿ ಸಚಿವರಾದ ಶ್ರೀ. ಎಂ.ಚಂದ್ರಶೇಖರ್ ರವರು ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇನೆ. ದಿವಂಗತರು ಜಯನಗರ ವಿಧಾನಸಭಾ ಕ್ಷೇತ್ರದ ಶಾಸಕರಾಗಿ, ಕರ್ನಾಟಕ ಸರ್ಕಾರದ ನಗರಾಭಿವೃದ್ಧಿ ಸಚಿವರಾಗಿ ಹಾಗೂ ಸಾರ್ವಜನಿಕ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುತ್ತಾರೆ. ದಿವಂಗತರು ಸರಳ ಸಜ್ಜನಿಕೆಯ ವ್ಯಕ್ತಿಯಾಗಿದ್ದು, ಜನಾನುರಾಗಿಗಳಾಗಿದ್ದರು. ಇವರ ಅಗಲಿಕೆಯಿಂದ ನಾವು ಒಬ್ಬ ರಾಜಕೀಯ ಮುತ್ಸದ್ದಿಯನ್ನು ಕಳೆದುಕೊಂಡಂತಾಗಿದೆ.

ದಿವಂಗತರು ರಾಜ್ಯಕ್ಕೆ ಹಾಗೂ ದೇಶಕ್ಕೆ ಸಲ್ಲಿಸಿರುವ ಸೇವೆಯನ್ನು ನಾವು ಸ್ಮರಿಸಬೇಕಾಗಿದ್ದು, ದಿವಂಗತರ ಆತ್ಮಕ್ಕೆ ಚಿರಶಾಂತಿ ಲಭಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದು:ಖವನ್ನು ಭರಿಸುವ ಶಕ್ತಿಯನ್ನು ಭಗವಂತನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಶ್ರೀ. ಸಿ.ಕೆ.ರಾಮಮೂರ್ತಿ ರವರು, ಶ್ರೀ.ಬಿ.ಆರ್.ನಂಜುಂಡಪ್ಪ, ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** 'ದಿನಾಂಕ:29–07–2011ರಂದು ಹಿರಿಯ ರಾಜಕೀಯ ಮುತ್ಸದ್ದಿ, ಮಾಜಿ ಸಚಿವರಾದ ಶ್ರೀ. ಎಂ.ಚಂದ್ರಶೇಖರ್ ರವರು ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತದೆ. ದಿವಂಗತರು ಜಯನಗರ ವಿಧಾನಸಭಾ ಕ್ಷೇತ್ರದ ಶಾಸಕರಾಗಿ, ಕರ್ನಾಟಕ ಸರ್ಕಾರದ ನಗರಾಭಿವೃದ್ಧಿ ಸಚಿವರಾಗಿ ಹಾಗೂ ಸಾರ್ವಜನಿಕ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುತ್ತಾರೆ. ದಿವಂಗತರು ಸರಳ ಸಜ್ಜನಿಕೆಯ ವ್ಯಕ್ತಿಯಾಗಿದ್ದು, ಜನಾನುರಾಗಿಗಳಾಗಿದ್ದರು. ಇವರ ಅಗಲಿಕೆಯಿಂದ ನಾವು ಒಬ್ಬ ರಾಜಕೀಯ ಮುತ್ಸದ್ದಿಯನ್ನು ಕಳೆದುಕೊಂಡಂತಾಗಿದೆ.

ದಿವಂಗತರು ರಾಜ್ಯಕ್ಕೆ ಹಾಗೂ ದೇಶಕ್ಕೆ ಸಲ್ಲಿಸಿರುವ ಸೇವೆಯನ್ನು ನಾವು ಸ್ಮರಿಸಬೇಕಾಗಿದ್ದು, ದಿವಂಗತರ ಆತ್ಮಕ್ಕೆ ಚಿರಶಾಂತಿ ಲಭಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದು:ಖವನ್ನು ಭರಿಸುವ ಶಕ್ತಿಯನ್ನು ಭಗವಂತನು ಕರುಣಿಸಲೆಂದು ಸಭೆಯು ಪ್ರಾರ್ಥಿಸುತ್ತದೆ".

(ಶಾರದಮ್ಮ)
ಮಹಾಪೌರರು